© www.coastalhut.com Karnataka's No.1 Job Site

# ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

## ಅಧಿಸೂಚನೆ

ಸಂ.ಇಎಸ್‌ಟಿ(4)ವಿಎ.ಸಿಆರ್.22/2016-17 ದಿನಾಂಕ: 15-06-2017

ವಿಷಯ: ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:
1) ಸರ್ಕಾರದ ಆದೇಶ ಸಂ.ಸಿಆಸುಇ 08 ಸೆಹಿಮ 95. ದಿನಾಂಕ 20.06.1995
2) ಸರ್ಕಾರದ ಆದೇಶ ಸಂ.ಸಿಆಸುಇ 06 ಸೆನೆನಿ 2001, ದಿನಾಂಕ 13.02.2001 ರ ಅನುಬಂಧ
3) ಸರ್ಕಾರದ ಆದೇಶ ಸಂ.ಸಿಆಸುಇ 53 ಸೆನೆನಿ 2007, ದಿನಾಂಕ 04.01.2008
4) ಸರ್ಕಾರದ ಆದೇಶ ಸಂ.ಕಂಇ 33 ಡಿಎಸ್‌ಪಿ 2012, ದಿನಾಂಕ 05.06.2012
5) ಸರ್ಕಾರದ ಅ.ಸ.ಪ.ಸಂ.ಕಂಇ 33 ಡಿಎಸ್‌ಪಿ 2012, ದಿನಾಂಕ 21.06.2012
6) ಸರ್ಕಾರದ ಆದೇಶ ಸಂ.ಕಂಇ 666 ಎಎಸ್‌ಡಿ 2012, ದಿನಾಂಕ 04.07.2013
7) ಈ ಕಛೇರಿಯ ಅಧಿಸೂಚನೆ ಸಂ.ಇಎಸ್‌ಟಿ(1)ಸಿಆರ್.65/13-14, ದಿನಾಂಕ 09-10-2013
8) ಈ ಪ್ರಾಧಿಕಾರದ ಅಧಿಸೂಚನೆ ಸಂ.ಸಿಬ್ಬಂದಿ(4)ಗ್ರಾಲೆ.ಸಿಆರ್.10/2014-15 ದಿನಾಂಕ 14-08-2014.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಒಟ್ಟು 16 ಗ್ರಾಮಲೆಕ್ಕಿಗರ ಹುದ್ದೆಗಳನ್ನು (ಈ ಪ್ರಾಧಿಕಾರದ ಉಲ್ಲೇಖ (8)ರ ಅಧಿಸೂಚನೆಯಂತೆ ಭರ್ತಿಯಾಗದೆ ಇರುವ 1 ಗ್ರಾಮಲೆಕ್ಕಿಗರ ಹುದ್ದೆಯನ್ನು ಒಳಗೊಂಡಂತೆ) ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಉಲ್ಲೇಖಿತ ಆದೇಶಗಳಂತೆ ಆನ್‌ಲೈನ್ (Online) ಮೂಲಕ ಅರ್ಜಿಗಳನ್ನು ಕರೆಯುವ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಈ ಕೆಳಕಾಣಿಸಿದ ಷರತ್ತಿಗೊಳಪಡಿಸಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

### 1) ಹುದ್ದೆಗಳ ವಿವರ:

ಅ. ಹುದ್ದೆ ಹಾಗೂ ಸಂಖ್ಯೆ : ಗ್ರಾಮಲೆಕ್ಕಿಗರ ಹುದ್ದೆಗಳು ಒಟ್ಟು – 16

ಆ. ವೇತನ ಶ್ರೇಣಿ : 11600-200-12000-250-13000-300-14200-350-15600-400-17200-450-19000-500-21000

### 2) ಹುದ್ದೆಗಳ ವರ್ಗೀಕರಣ:

ಎ) 2014ರಲ್ಲಿ ಹೊರಡಿಸಿದ ಅಧಿಸೂಚನೆಯಂತೆ ಭರ್ತಿಯಾಗದೆ ಇರುವ 1 ಖಾಲಿ ಹುದ್ದೆಯನ್ನು ತುಂಬ ಬೇಕಾದ ರೋಸ್ಟರ್ ಬಿಂದುವಿನ ವಿವರ: (ರೋಸ್ಟರ್ ಬಿಂದು 50)

| ಕ್ರ.ಸಂ. | ವರ್ಗ | ಉಪ ವರ್ಗ | ಒಟ್ಟು |
|---|---|---|---|
| 1 | ಪ್ರವರ್ಗ-2(ಎ) | ಗ್ರಾಮೀಣ ಅಭ್ಯರ್ಥಿ | 1 |
| | ಒಟ್ಟು | 1 | 1 |

ಬಿ) 2017ರ ಪ್ರಸ್ತುತ ಅಧಿಸೂಚನೆಯಂತೆ ಉಳಕೆ 15 ಖಾಲಿ ಹುದ್ದೆಗಳನ್ನು ತುಂಬಬೇಕಾದ ರೋಸ್ಟರ್ ಬಿಂದುಗಳ ವಿವರ: (ರೋಸ್ಟರ್ ಬಿಂದು 81 ರಿಂದ 95)

| ಕ್ರ. ಸಂ. | ವರ್ಗ | ಸಾಮಾನ್ಯ | ಮಹಿಳೆ | ಗ್ರಾಮೀಣ | ಅಂಗ ವಿಕಲರು | ಕನ್ನಡ ಮಾಧ್ಯಮ | ಒಟ್ಟು |
|---|---|---|---|---|---|---|---|
| 1 | ಪರಿಶಿಷ್ಟ ಜಾತಿ | – | 1 | 1 | – | 1 | 3 |
| 2 | ಪ್ರವರ್ಗ–2(ಎ) | – | – | 1 | – | 1 | 2 |
| 3 | ಪ್ರವರ್ಗ–2(ಬಿ) | – | – | – | 1 | – | 1 |
| 4 | ಪ್ರವರ್ಗ–3(ಎ) | – | – | – | 1 | – | 1 |
| 5 | ಪ್ರವರ್ಗ–3(ಬಿ) | – | – | – | 1 | – | 1 |
| 6 | ಸಾಮಾನ್ಯ | 2 | 2 | 2 | 1 | 0 | 7 |
| | ಒಟ್ಟು | 2 | 3 | 4 | 4 | 2 | 15 |

3. **ಶೈಕ್ಷಣಿಕ ವಿದ್ಯಾರ್ಹತೆ:**

ದ್ವಿತೀಯ ವರ್ಷದ ಪಿ.ಯು.ಸಿ. ಅಥವಾ 12ನೇ ತರಗತಿ(CBSE/ICSE)ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಕಂಪ್ಯೂಟರ್ ಅನುಭವ ಹೊಂದಿರಬೇಕು.

4. **ವಯೋಮಿತಿ** :

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಾಣಿಸಿದ ವಯೋಮಿತಿ ಹೊಂದಿರಬೇಕು.

| | | |
|---|---|---|
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ–1 | : | ಕನಿಷ್ಠ 18 ವರ್ಷ ಗರಿಷ್ಠ 40 ವರ್ಷ |
| ಇತರೆ ಹಿಂದುಳಿದ ವರ್ಗ | : | ಕನಿಷ್ಠ 18 ವರ್ಷ ಗರಿಷ್ಠ 38 ವರ್ಷ |
| ಸಾಮಾನ್ಯ ವರ್ಗ | : | ಕನಿಷ್ಠ 18 ವರ್ಷ ಗರಿಷ್ಠ 35 ವರ್ಷ |

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

ಅ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ 3 ವರ್ಷಗಳು ಅಥವಾ ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳು ಸೇರಲ್ಪಡುತ್ತವೆ.
ಆ) ಅಭ್ಯರ್ಥಿಯು ಅಂಗವಿಕಲರಾಗಿದ್ದಲ್ಲಿ 10 ವರ್ಷಗಳು.
ಇ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

5. **ಅವಧಿ:**

ಆನ್‌ಲೈನ್ (Online) ಮೂಲಕ ಅರ್ಜಿಗಳನ್ನು ಸಲ್ಲಿಸಲು ಮತ್ತು ನಿಗದಿತ ಅರ್ಜಿ ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಅವಧಿ:

**ದಿನಾಂಕ 22-06-2017 ರಿಂದ ದಿನಾಂಕ 21-07-2017 ರವರೆಗೆ**

6. **ಅರ್ಜಿಯ ನಮೂನೆ:**

**ಆನ್‌ಲೈನ್ (Online) ಮೂಲಕ ಅರ್ಜಿ ಸಲ್ಲಿಸುವ ವಿಧಾನ:**

ಅರ್ಜಿಯನ್ನು **ಆನ್‌ಲೈನ್ (Online) ಮುಖಾಂತರ** ಮಾತ್ರ ಸಲ್ಲಿಸಬೇಕು. ಅರ್ಜಿಯನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಭ್ಯರ್ಥಿಯು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಧಿಕಾರಿ ಕಛೇರಿಯ ಅಧಿಕೃತ ವೆಬ್‌ಸೈಟ್ ಆದ http://bengalururural-va.kar.nic.inರ ಮೇಲೆ ಕ್ಲಿಕ್ ಮಾಡಿದಾಗ ಕಂಪ್ಯೂಟರ್ ಪರದೆಯ ಮೇಲೆ ಬರುವ ತಂತ್ರಾಂಶದಲ್ಲಿ ಅರ್ಜಿಯನ್ನು ತುಂಬಬೇಕು **ಮತ್ತು ಛಾಯಾಚಿತ್ರವನ್ನು ಅಪ್‌ಲೋಡ್ ಮಾಡಬೇಕು.** ಅಭ್ಯರ್ಥಿಯು ಆನ್‌ಲೈನ್‌ನಲ್ಲಿ ಭರ್ತಿ ಮಾಡಿದ ಅರ್ಜಿಯಲ್ಲಿನ ಮಾಹಿತಿ ಸರಿಯಾಗಿರುವ ಬಗ್ಗೆ ಖಚಿತಪಡಿಸಿಕೊಂಡು, ನಂತರ submit button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ಆನಂತರ ಆ ವೆಬ್ ಸೈಟ್‌ನಲ್ಲಿ ಕಂಪ್ಯೂಟರ್ ಪರದೆಯ ಮೇಲೆ ಇರುವ Pay online/Chalan ಮೇಲೆ ಕ್ಲಿಕ್ ಮಾಡಿದಾಗ ಬರುವ ಎಸ್.ಬಿ.ಐ. ಬ್ಯಾಂಕಿನ SBI COLLECT ಪುಟದ ಕೊನೆಯಲ್ಲಿ ಇರುವ Proceed button ಅನ್ನು ಒತ್ತಿದರೆ Payment Category ಪುಟ ಬರುತ್ತದೆ. ಆ ಪುಟದಲ್ಲಿ ಸೂಕ್ತ ಆಯ್ಕೆ ಮಾಡಿಕೊಂಡ ನಂತರ ಬರುವ Provide details of Payment ಪುಟದಲ್ಲಿ ಅವಶ್ಯ ಮಾಹಿತಿಯನ್ನು ಭರ್ತಿ ಮಾಡಿ submit button ಅನ್ನು ಒತ್ತಬೇಕು. ತದನಂತರ ಪರದೆಯ ಮೇಲೆ ಬರುವ ಪುಟದಲ್ಲಿ ಅರ್ಜಿ ಶುಲ್ಕವನ್ನು ಇಂಟರ್‌ನೆಟ್ ಬ್ಯಾಂಕಿಂಗ್, ಡೆಬಿಟ್ ಕಾರ್ಡ್, ಕ್ರೆಡಿಟ್ ಕಾರ್ಡ್, ಇತರೆ ಆನ್‌ಲೈನ್ ಮೂಲಕ ಅಥವಾ ಆಫ್‌ಲೈನ್ ಎಂದರೆ ಎಸ್.ಬಿ.ಐ.ನ ಯಾವುದೇ ಶಾಖೆಯಲ್ಲಿ ನಗದು ಮೂಲಕ ಪಾವತಿ ಮಾಡುವ ವಿಧಾನವನ್ನು ಆಯ್ಕೆ ಮಾಡಿಕೊಳ್ಳಬಹುದು. ಇಂಟರ್‌ನೆಟ್ ಬ್ಯಾಂಕಿಂಗ್, ಡೆಬಿಟ್ ಕಾರ್ಡ್ ಕ್ರೆಡಿಟ್ ಕಾರ್ಡ್ ಅಥವಾ ಇತರೆ ಆನ್‌ಲೈನ್ ಮೂಲಕ ಪಾವತಿ ಮಾಡಿದಲ್ಲಿ ಪರದೆಯ ಮೇಲೆ (Acknowledgement Slip) ಮೂಡುತ್ತದೆ. ಇದರ ಒಂದು ಪ್ರತಿಯನ್ನು ಪ್ರಿಂಟ್ ತೆಗೆದುಕೊಂಡು ಅಭ್ಯರ್ಥಿಯು ಸುರಕ್ಷಿತವಾಗಿ ಇಟ್ಟುಕೊಳ್ಳಬೇಕು. ಅಭ್ಯರ್ಥಿಯು ಆಫ್‌ಲೈನ್ ಎಂದರೆ ನಗದು ಮೂಲಕ ಪಾವತಿ ಮಾಡುವುದಾದರೆ ಸ್ವೀಕೃತಿ ಪತ್ರ (Acknowledgement Slip) ಮತ್ತು ದ್ವಿಪ್ರತಿ ಚಲನ್‌ನ್ನು ತೆಗೆದುಕೊಳ್ಳಬೇಕು. ಈ ಚಲನ್‌ನೊಂದಿಗೆ ನಿಗದಿತ ಅರ್ಜಿ ಶುಲ್ಕ ಮತ್ತು ಬ್ಯಾಂಕ್ ಸೇವಾ ಶುಲ್ಕವನ್ನು **ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಯಾವುದಾದರೂ ಶಾಖೆಯಲ್ಲಿ, ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಹೆಸರಿನಲ್ಲಿ ಇರುವ ಎಸ್.ಬಿ.ಐ., ರೇಸ್ ಕೋರ್ಸ್ ರಸ್ತೆ ಶಾಖೆ, ಬೆಂಗಳೂರು (IFSC Code SBIN0006198) ರಲ್ಲಿನ ಚಾಲ್ತಿ ಖಾತೆ ಸಂ. (Current Account No.) 34030804946 ಗೆ ಪಾವತಿಸಬೇಕು.** ಪಾವತಿಸುವಾಗ ಚಲನ್‌ನಲ್ಲಿ ಅರ್ಜಿಯ ಸಂಖ್ಯೆ (Reference Number) ಮತ್ತು ಅಭ್ಯರ್ಥಿಯ ಹೆಸರು ಸರಿಯಾಗಿ ನಮೂದಾಗಿದೆಯೇ ಎಂದು ಪರಿಶೀಲಿಸಬೇಕು. ಅಭ್ಯರ್ಥಿಯು ಸ್ವೀಕೃತಿ ಪತ್ರವನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳಬೇಕು. ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಹಾಗೂ ಬ್ಯಾಂಕಿನಲ್ಲಿ ನಿಗದಿತ ಅರ್ಜಿ ಶುಲ್ಕ ಪಾವತಿಸಲು ಕೊನೆಯ **ದಿನಾಂಕ 21-07-2017** ಆಗಿರುತ್ತದೆ. ಮೂಲ ದಾಖಲೆಗಳನ್ನು ಹಾಗೂ ಅದರ ಒಂದು ಸೆಟ್ ದೃಢೀಕೃತ ಪ್ರತಿಗಳನ್ನು ಪರಿಶೀಲನೆಗೆ ನಿಗದಿಪಡಿಸುವ ದಿನಾಂಕದಂದು ಈ ಕೆಳಗಿನ ನೇಮಕಾತಿ ಪ್ರಾಧಿಕಾರಕ್ಕೆ ಹಾಜರುಪಡಿಸಬೇಕು.

**ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ,ಬೆಂಗಳೂರು ಗ್ರಾಮಾಂತರ ಜಿಲ್ಲೆ, 1ನೇ ಮಹಡಿ, ಪೋಡಿಯಂ ಬ್ಲಾಕ್,ವಿ.ವಿ.ಟವರ್, ಡಾ:ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು-560001**

ಯಾವುದೇ ರೀತಿಯ ದಾಖಲೆಗಳನ್ನು ಅರ್ಜಿಯೊಂದಿಗೆ ಸಲ್ಲಿಸುವ ಅಗತ್ಯ ಇರುವುದಿಲ್ಲ. ಆದರೆ, ಮೂಲ ದಾಖಲೆಗಳ ಪರಿಶೀಲನಾ ದಿನಾಂಕದಂದು, ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ಒಳಗಾಗಿ ಪಡೆದುಕೊಂಡ ದೃಢೀಕೃತ ದಾಖಲೆಗಳನ್ನು ಹಾಜರುಪಡಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ **http:bangalorerural.nic.in** ರಲ್ಲಿ ಪರಿಶೀಲಿಸಬಹುದಾಗಿದೆ ಅಥವಾ ದೂರವಾಣಿ ಸಂ. 22867007/22860412 ಗಳನ್ನು ಸಂಪರ್ಕಿಸಬಹುದಾಗಿದೆ.

**7. ಅಭ್ಯರ್ಥಿಯು ನಿಗದಿತ ಅರ್ಜಿ ಶುಲ್ಕವನ್ನು ಬ್ಯಾಂಕ್‌ಗೆ ಪಾವತಿಸುವ ಬಗ್ಗೆ :**

1. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1 / ಮಾಜಿ ಸೈನಿಕ / ಮಹಿಳಾ ಅಭ್ಯರ್ಥಿ – **ರೂ.150/-**
2. ಸಾಮಾನ್ಯ / ಇತರೆ ಅಭ್ಯರ್ಥಿ – **ರೂ.300/-**

**8. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು :**

ಜಾತಿ ಮೀಸಲಾತಿ ಕೋರಬಯಸುವ –

- ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅಭ್ಯರ್ಥಿ – ನಮೂನೆ "ಡಿ"
- ಪ್ರವರ್ಗ-1 ಅಭ್ಯರ್ಥಿ – ನಮೂನೆ "ಇ"
- ಪ್ರವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿ – ನಮೂನೆ "ಎಫ್" ನಲ್ಲಿ

ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪ್ರಮಾಣ ಪತ್ರವನ್ನು ಪಡೆದು ಅದರ ದೃಢೀಕೃತ ನಕಲನ್ನು ಮೂಲ ದಾಖಲೆಗಳ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

**9. ಗ್ರಾಮೀಣ ಅಭ್ಯರ್ಥಿಗಳು :**

ಗ್ರಾಮೀಣ ಅಭ್ಯರ್ಥಿ ಎಂದರೆ ಒಂದು ಹುದ್ದೆಗಾಗಿ ಮೀಸಲಾದ ಅರ್ಹತಾ ಪರೀಕ್ಷೆಯು ಎಸ್‌ಎಸ್‌ಎಲ್‌ಸಿ ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ, 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಢೀಕೃತ ಗ್ರಾಮೀಣ ಪ್ರಮಾಣ ಪತ್ರವನ್ನು ಪಡೆದು ಹಾಜರುಪಡಿಸಬೇಕು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಮಾತ್ರ ಈ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಗ್ರಾಮೀಣ ಅಭ್ಯರ್ಥಿಗೆಂದು ಮೀಸಲಿರಿಸಿದ ಹುದ್ದೆಯನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಯು ನಮೂನೆ-2ರ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದು ಅದರ ಒಂದೊಂದು ಫೋಟೋ ಪ್ರತಿಯನ್ನು ಹಾಜರುಪಡಿಸಬೇಕು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ-1/2ಎ/2ಬಿ/3ಎ/3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಯು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು, ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲುರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ಒಂದು ಪ್ರತಿಯನ್ನು ಹಾಜರುಪಡಿಸಬೇಕು.

**10. ಅಂಗವಿಕಲ ಅಭ್ಯರ್ಥಿಗಳು :**

ಸರ್ಕಾರದ ಅಧಿಸೂಚನೆ ಸಂ.ಡಿಪಿಎಆರ್ 54 ಎಸ್‌ಆರ್‌ಆರ್ 2012, ದಿನಾಂಕ 23-06-2012 ರಲ್ಲಿ ಗ್ರಾಮಲೆಕ್ಕಿಗರ ಹುದ್ದೆಗೆ ಆಯ್ಕೆ ಮಾಡಲು ಗುರುತಿಸಿರುವ ಅಂಗವಿಕಲತೆಗೆ ಮಾತ್ರ ಕಾಯ್ದಿರಿಸಲಾಗಿದೆ. ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 100 ಬಿಎಸ್‌ಸಿ 2011 ದಿನಾಂಕ 29-06-2012 ರಂತೆ ಈ ಕೆಳಕಾಣಿಸಿದ ಅಂಗವಿಕಲತೆಯುಳ್ಳವರನ್ನು ಮಾತ್ರ ಗ್ರಾಮ ಲೆಕ್ಕಿಗರ ನೇಮಕಾತಿಗೆ ಪರಿಗಣಿಸಲಾಗುವುದು.

- ಕುಷ್ಠರೋಗದಿಂದ ಗುಣಮುಖರಾದವರು (Leprosy Cured)
- ಶ್ರವಣದೋಷವುಳ್ಳವರು (Hearing Impaired)
- ದೈಹಿಕ ಅಂಗವಿಕಲರು (Loco motor Disability)
- ಮಾನಸಿಕ ಅಸ್ವಸ್ಥತೆ (Mentally Ill)

ಅಂಗವಿಕಲತೆಗೆ ಮೀಸಲಾತಿ ಪಡೆಯಲಿಚ್ಛಿಸುವ ಅಭ್ಯರ್ಥಿಯು ಸರ್ಕಾರದ ಆದೇಶ ಸಂ.ಸಿಆಸುಇ 115 ಸೇನನಿ 2005, ದಿನಾಂಕ 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವೈಕಲ್ಯತೆ ಬಗ್ಗೆ ಸಂಬಂಧಪಟ್ಟ ಜಿಲ್ಲಾ ವೈದ್ಯಕೀಯ ಮಂಡಳಿಯು ನೀಡಿರುವ ಪ್ರಮಾಣ ಪತ್ರವನ್ನು ಹೊಂದಿರಬೇಕು.

**11. ಅರ್ಹತಾ ಷರತ್ತುಗಳು:**

1. ಭಾರತೀಯ ನಾಗರೀಕನಾಗಿರತಕ್ಕದ್ದು.
2. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರು ನೇಮಕಾತಿ ಹೊಂದುವ ಹುದ್ದೆಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನು ಉಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
3. ದೈಹಿಕವಾಗಿ ಅನರ್ಹರಾಗಿದ್ದಲ್ಲಿ, ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಪ್ರಾಧಿಕಾರ ಕಾಯ್ದಿರಿಸಿಕೊಂಡಿದೆ.
4. ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಮೇಲ್ಕಂಡ ಅರ್ಹತೆಗಳನ್ನು ಹೊಂದಿ ವಯೋಮಿತಿಯೊಳಗೆ ಇರುವ ಅಭ್ಯರ್ಥಿಯುಮಾತ್ರ ನೇಮಕಾತಿಗಾಗಿ ಅರ್ಜಿ ಸಲ್ಲಿಸುವ ಅರ್ಹತೆಯನ್ನು ಹೊಂದಿರುತ್ತಾರೆ.

**12. ಪ್ರಮುಖ ಸೂಚನೆಗಳು:**

ಅಭ್ಯರ್ಥಿಯು ಕೆಳಕಾಣಿಸಿದ ಪ್ರಮಾಣಪತ್ರಗಳನ್ನು ಮೂಲ ದಾಖಲೆಗಳ ಪರಿಶೀಲನಾ ಸಮಯದಲ್ಲಿ ತಪ್ಪದೇ ಸಲ್ಲಿಸಬೇಕು.

1. ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ/ಪ್ರಮಾಣ ಪತ್ರ ಮತ್ತು ಕಂಪ್ಯೂಟರ್ ಜ್ಞಾನದ ಬಗ್ಗೆ ದಾಖಲೆ
2. ನಿಗದಿಪಡಿಸಿದ ಅರ್ಜಿ ಶುಲ್ಕವನ್ನು ಬ್ಯಾಂಕ್‌ಗೆ ಜಮಾ ಮಾಡಿದ ಮೂಲ ಚಲನ್.
3. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ /ವರ್ಗಾವಣೆ ಪತ್ರ/ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಗಳ ದೃಢೀಕೃತ ಪತ್ರ.
4. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ-1/2ಎ/2ಬಿ/3ಎ/3ಬಿ ರಜಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
5. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಯು ನಮೂನೆ-2ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಸಂಬಂಧಪಟ್ಟ ತಾಲ್ಲೂಕು ತಹಶೀಲ್ದಾರರಿಂದ ಪಡೆದಿರುವ ಪ್ರಮಾಣ ಪತ್ರ.
6. ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ-1/2ಎ/2ಬಿ/3ಎ/3ಬಿ ಗೆ ಸೇರಿದ ಅಭ್ಯರ್ಥಿಯು ನಮೂನೆ-2ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ.
7. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
8. ಅಂಗವೈಕಲ್ಯತೆ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
9. ಸೈನಿಕ ಸೇವೆಯಿಂದ ಬಿಡುಗಡೆಯಾದ ಬಗ್ಗೆ ಪ್ರಮಾಣಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
10. ಕ್ರ.ಸಂ.3, 4, 5, 6, 7 ಮತ್ತು 8ಕ್ಕೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು.

**13. ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಯವರೊಂದಿಗೆ ಪತ್ರ ವ್ಯವಹಾರ :**

ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಯವರ ಕಛೇರಿಯಿಂದ ಅಭ್ಯರ್ಥಿಯ ವಿಚಾರದಲ್ಲಿ ಅಭ್ಯರ್ಥಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸತಕ್ಕದ್ದಲ್ಲ. ನೇಮಕಾತಿಗೆ ಅರ್ಜಿ ಸಲ್ಲಿಸಿದ ನಂತರ ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಯು ಲಿಖಿತ ಮನವಿ ಮೂಲಕ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಯವರ ಕಛೇರಿಯ ಗಮನಕ್ಕೆ ತರಬೇಕು.

**14. ಇತರೆ ಸೂಚನೆಗಳು:**

1. ಅಭ್ಯರ್ಥಿಯು ಆನ್‌ಲೈನ್‌ನಲ್ಲಿ ಪಡೆದ Challan ಹಾಗೂ Acknowledgement Slip ನ್ನು ಮಡಚುವುದಾಗಲಿ, ಹರಿಯುವುದಾಗಲಿ ಮಾಡದೇ ಹಾಳಾಗದಂತೆ ಎಚ್ಚರವಹಿಸಬೇಕು.
2. ಸೇವೆಯಲ್ಲಿರುವ ಅಭ್ಯರ್ಥಿಯು ಅವರ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣ ಪತ್ರವನ್ನು (No Objection Certificate) ಪಡೆದು ಮೂಲ ದಾಖಲೆಗಳ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

3. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರದ ಅಧ್ಯಕ್ಷರಾದ ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು ಇವರು ಕಾಯ್ದಿರಿಸಿಕೊಂಡಿರುತ್ತಾರೆ.
4. ಅಭ್ಯರ್ಥಿಯ ಹೆಸರು ಕೇವಲ ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ. ಆಯ್ಕೆಯ ಸಂಬಂಧವಾಗಿ ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಆಸ್ಪದ ಇರುವುದಿಲ್ಲ.
5. ವೆಬ್‌ಸೈಟ್‌ನಲ್ಲಿ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ ಆಯ್ಕೆಯಾದ ಅಭ್ಯರ್ಥಿಯು ಸೂಚಿಸಿದ ದಿನಾಂಕದಂದು ತನ್ನ ಎಲ್ಲಾ ದಾಖಲೆಗಳೊಂದಿಗೆ ಪರಿಶೀಲನಾ ಸಂದರ್ಶನಕ್ಕೆ ಈ ಕಛೇರಿಗೆ ನಿಗದಿತ ಅವಧಿಯೊಳಗೆ ಹಾಜರಾಗಬೇಕು.
6. ಆಯ್ಕೆಯಾದ ಅಭ್ಯರ್ಥಿಯು ಎರಡು ವರ್ಷಗಳ ಪರಿವೀಕ್ಷಣಾ ಅವಧಿ ಪೂರೈಸುವುದು ಕಡ್ಡಾಯ ವಾಗಿರುತ್ತದೆ.

**15. ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವಂತ, ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿಯನ್ನು ರದ್ದುಪಡಿಸಲಾಗುವುದು.

**16. ಆಯ್ಕೆ ವಿಧಾನ :**

ಕರ್ನಾಟಕ ಜನರಲ್ ಸರ್ವೀಸಸ್ (Revenue Subordinate branch) (Cadre & Recruitment) (ತಿದ್ದುಪಡಿ) ನಿಯಮಗಳು 2008 ಮತ್ತು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿ.ಯು.ಸಿ. ಅಥವಾ ಸಿ.ಬಿ.ಎಸ್.ಇ. ಅಥವಾ ಐ.ಸಿ.ಎಸ್.ಇ. ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ (on merit) ಆಧಾರದ ಮೇಲೆ ಆಯಾಯ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು.

ಸಹಿ/-
(ಎಸ್.ಪಾಲಯ್ಯ, ಭಾ.ಆ.ಸೇ.)
ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿ,
ಬೆಂಗಳೂರು ಗ್ರಾಮಾಂತರ ಜಿಲ್ಲೆ

<u>ಪ್ರತಿಯನ್ನು:</u>

1. ಮಹಾಲೇಖಪಾಲರು, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಕಂದಾಯ ಇಲಾಖೆ, ಬಿಎಂಟಿಸಿ ಕಟ್ಟಡ, ಶಾಂತಿನಗರ, ಬೆಂಗಳೂರು.
5. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಸಂಪಂಗಿರಾಮನಗರ, ಬೆಂಗಳೂರು
6. ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಪೋಡಿಯಂ ಬ್ಲಾಕ್, ವಿ.ವಿ.ಕೇಂದ್ರ, ಬೆಂಗಳೂರು

© www.coastalhut.com Karnataka's No.1 Job Site

7. ಜಿಲ್ಲಾ ಅಧಿಕಾರಿ, ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಪೋಡಿಯಂ ಬ್ಲಾಕ್, ವಿ.ವಿ.ಕೇಂದ್ರ, ಬೆಂಗಳೂರು
8. ಜಿಲ್ಲಾ ಅಂಗವಿಕಲ ಕಲ್ಯಾಣ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಓಕಳಿಪುರಂ, ಬೆಂಗಳೂರು
9. ಉಪವಿಭಾಗಾಧಿಕಾರಿ, ದೊಡ್ಡಬಳ್ಳಾಪುರ ಉಪವಿಭಾಗ, ಮಿನಿ ವಿಧಾನಸೌಧ, ದೊಡ್ಡಬಳ್ಳಾಪುರ.
10. ತಹಶೀಲ್ದಾರರು, ದೊಡ್ಡಬಳ್ಳಾಪುರ/ದೇವನಹಳ್ಳಿ/ನೆಲಮಂಗಲ/ಹೊಸಕೋಟೆ ತಾಲ್ಲೂಕು
11. ಕಛೇರಿ ಪ್ರತಿಗಳು

(ಎಸ್.ಪಾಲಯ್ಯ, ಭಾ.ಆ.ಸೇ)
ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿ,
ಬೆಂಗಳೂರು ಗ್ರಾಮಾಂತರ ಜಿಲ್ಲೆ